ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 38(101)
ಸದಸ್ಯರ ಹೆಸರು : ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 07-12-2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಪ್ರೌಢ ಶಾಲೆಗಳ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾಗಿ ಬಡ್ತಿ ನೀಡಿ ಎಷ್ಟು ವರ್ಷಗಳಾಗಿದೆ:	2011ರಲ್ಲಿ ಪ್ರೌಢ ಶಾಲೆಗಳ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾಗಿ ಬಡ್ತಿ ನೀಡಲಾಗಿರುತ್ತದೆ.
ಆ)	ಬಡ್ತಿಗಾಗಿ ಅರ್ಹರಿರುವ ಸಹ ಶಿಕ್ಷಕರ ಸಂಖ್ಯೆ ಎಷ್ಟು:	ಬಡ್ತಿಗಾಗಿ ಅರ್ಹರಿರುವ ಸಹ ಶಿಕ್ಷಕರ ಸಂಖ್ಯೆ ಈ ಕೆಳಕಂಡಂತಿದೆ (ಎ) ಬೆಂಗಳೂರು ವಿಭಾಗ — 6283 (ಬಿ) ಮೈಸೂರು ವಿಭಾಗ — 5973 (ಸಿ) ಬೆಳಗಾವಿ ವಿಭಾಗ — 6174 (ಡಿ) ಕಲಬುರಗಿ ವಿಭಾಗ — 4888 ಒಟ್ಟು — 23318
ಇ)	ಯಾವ ಕಾಲಮಿತಿಯೊಳಗೆ ಅವರುಗಳಿಗೆ ಬಡ್ತಿ ನೀಡಲಾಗುವುದು? (ಮಾಹಿತಿ ನೀಡುವುದು)	ಪ್ರಸ್ತುತ ಬಡ್ತಿ ಕೋಟಾದಡಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಹುದ್ದೆಗಳು ವಯೋ ನಿವೃತ್ತಿ, ರಾಜೀನಾಮೆ ಹಾಗೂ ನಿಧನದಿಂದ ತೆರವಾದಾಗ ನಿಯಮಾನುಸಾರ ಪ್ರೌಢಶಾಲೆಗಳ ಸಹಶಿಕ್ಷಕರುಗಳಿಗೆ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಇಪಿ 170 ಡಿಜಿಡಬ್ಲ್ಯೂ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.